**ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಎಂ.ಪಿ ಸುಜಾ ಕುಶಾಲಪ್ಪ ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ "ದಿನಾಂಕ: 06.12.2023 ರಂದು ಕೊಡಗು ಸ್ಥಳೀಯ ಶಕ್ತಿ ದಿನ ಪತ್ರಿಕೆಯಲ್ಲಿ ಕೊಳತೋಡು ಗ್ರಾಮದಲ್ಲಿ ಹುಲಿ ಮತ್ತು ಕಾಡಾನೆ ಹಾವಳಿ ದೂರು ನೀಡಿದರೂ ಸ್ಪಂದಿಸದ ಅರಣ್ಯ ಇಲಾಖೆ – ಗ್ರಾಮಸ್ಥರ ಅಸಮಾಧಾನ ಎಂಬ ಶೀರ್ಷಿಕೆಯಡಿಯಲ್ಲಿ ವರದಿ ಪ್ರಕಟಗೊಂಡಿರುತ್ತದೆ. ಕಳೆದ ಹಲವು ಸಮಯಗಳಿಂದ ಗ್ರಾಮದಲ್ಲಿ ನಿರಂತರವಾಗಿರುವ ಹುಲಿ ಮತ್ತು ಕಾಡಾನೆಗಳ ಹಾವಳಿ ಗ್ರಾಮಸ್ಥರಿಗೆ ತೀವ್ರ ಸಮಸ್ಯೆಯಾಗಿದೆ. ಈ ಕುರಿತು ಸಂಬಂಧಿಸಿದ ಅರಣ್ಯ ಇಲಾಖೆಗೆ ದೂರು ನೀಡಿದರೂ ಸಹ, ಇದುವರೆವಿಗೂ ಸ್ಪಂದಿಸಿಲ್ಲ ಎಂದು ಕೊಳತೋಡು ಗ್ರಾಮಸ್ಥರು ದೂರಿದ್ದಾರೆ. ಕಳೆದ ಹಲವು ತಿಂಗಳಿನಿಂದ ನಡೆಯುತ್ತಿರುವ ಈ ವನ್ಯಜೀವಿಗಳ ಉಪಟಳದಿಂದಾಗಿ ಜನ ಬೇಸತ್ತು ಹೋಗಿದ್ದಾರೆ. ಕಾಡಿನಲ್ಲಿ ಇರಬೇಕಾದ ವನ್ಯಜೀವಿಗಳು ನಾಡಿಗೆ ಬಂದು ಕೃಷಿಕರಿಗೆ ತೀವ್ರ ತೊಂದರೆ ನೀಡುತ್ತಿದ್ದು, ಇದಕ್ಕೆ ಅರಣ್ಯ ಇಲಾಖೆಯ ನಿರ್ಲಕ್ಷ್ಯವೇ ಕಾರಣವೆಂದು ಹೇಳಬಹುದು. ಹಲವು ತಿಂಗಳಿನಿಂದ ಹುಲಿಯೊಂದು ಗ್ರಾಮದಲ್ಲಿ ನಿರಂತರವಾಗಿ ಅಡ್ಡಾಡುತ್ತಿದೆ. ತನ್ನ ಮರಿಯೊಂದಿಗೆ ಆಗಿಂದಾಗ್ಗೆ, ಜನರ ಕಣ್ಣಿಗೆ ಕಾಣಿಸಿಕೊಳ್ಳುತ್ತಿರುವ ಈ ಹುಲಿಯ ಸಂಚಾರದಿಂದಾಗಿ ಗ್ರಾಮಸ್ಥರು ಭಯದಿಂದಲೇ ದಿನ ಕಳೆಯುವಂತಾಗಿದೆ. ಹುಲಿ ಸಂಚಾರದಿಂದ ಕಾರ್ಮಿಕರು ಭಯಪಡುತ್ತಿದ್ದು, ತೋಟದ ಕೆಲಸಗಳಿಗೆ ಬರಲು ಹಿಂದೇಟು ಹಾಕುತ್ತಿದ್ದಾರೆ. ಇದು ಕೃಷಿ ಚಟುವಟಿಕೆಗಳಿಗೆ ನೇರ ಪರಿಣಾಮ ಬೀರುತ್ತಿದೆ. ಅಲ್ಲದೇ, ಈ ಭಾಗದಲ್ಲಿರುವ ಕೃಷಿ ಕಾರ್ಮಿಕರ ಮಕ್ಕಳು ಪ್ರತಿನಿತ್ಯ, ಆತಂಕದಲ್ಲಿ ಶಾಲಾ ಕಾಲೇಜುಗಳಿಗೆ ತೆರಳುವ ಪರಿಸ್ಥಿತಿ ನಿರ್ಮಾಣಗೊಂಡಿದೆ. ಗ್ರಾಮದ ಸಣ್ಣ ಮತ್ತು ಅತಿ ಸಣ್ಣ ಭತ್ತದ ಕೃಷಿಕರು ತಮಗಿರುವ ಅಲ್ಪಸ್ವಲ್ಪ ಗದ್ದೆಯಲ್ಲಿ ಭತ್ತದ ಕೃಷಿ ಮಾಡಿದ್ದಾರೆ. ಇದೀಗ ಭತ್ತ ಕೊಯ್ಲಿಗೆ ಬರುತ್ತಿದ್ದಂತೆ, ಗ್ರಾಮಕ್ಕೆ ಲಗ್ಗೆ ಇಡುವ ಕಾಡಾನೆಗಳ ಹಿಂಡು ಭತ್ತದ ಗದ್ದೆಗೆ ನುಗ್ಗಿ, ಇಡೀ ಕೃಷಿಯನ್ನೇ ನಾಶಗೊಳಿಸುತ್ತಿದೆ. ಆದ್ದರಿಂದ, ಹುಲಿ ಮತ್ತು ಕಾಡಾನೆಗಳ ಹಾವಳಿಯನ್ನು ತಡೆಗಟ್ಟಲು ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ" ಸೂಚನೆಗೆ ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ.**

******

ವಿರಾಜಪೇಟೆ ಅರಣ್ಯ ವಲಯದ ವ್ಯಾಪ್ತಿಗೆ ಬರುವ ಗ್ರಾಮಗಳಾದ ಕೊಳತೋಡು ಬೈಗೋಡು ಗ್ರಾಮದಲ್ಲಿ ಹುಲಿ ಮತ್ತು ಕಾಡಾನೆ ಹಾವಳಿ ಬಗ್ಗೆ ಕೊಳತೋಡು ಬೈಗೋಡು ಗ್ರಾಮದ ಗ್ರಾಮಸ್ಥರು ದಿನಾಂಕ: 29-11-2023 ರಂದು ಇಲಾಖೆಗೆ ದೂರು ನೀಡಿದ ಮೇರೆಗೆ, ವಿರಾಜಪೇಟೆ ಅರಣ್ಯ ವಲಯದ ವಲಯ ಅರಣ್ಯಾಧಿಕಾರಿಗಳು ಮತ್ತು ಕ್ಷಿಪ್ರ ಸ್ಪಂದನ ತಂಡದ (ಆರ್.ಆರ್.ಟಿ) ಸಿಬ್ಬಂದಿಗಳು ಹಾಗೂ ವಲಯದ ಇತರೆ ಕಾರ್ಯ ನಿರ್ವಾಹಕ ಸಿಬ್ಬಂದಿಗಳು ಸೇರಿದಂತೆ ಸದರಿ ಗ್ರಾಮದಲ್ಲಿದ್ದ ಕಾಡಾನೆಯನ್ನು ಮತ್ತು ಹುಲಿಯನ್ನು ಮರಳಿ ಕಾಡಿಗೆ ಓಡಿಸುವ ಕಾರ್ಯಾಚರಣೆಯ ಬಗ್ಗೆ ದಿನಾಂಕ: 30-11-2023 ಮತ್ತು ದಿನಾಂಕ: 01-12-2023 ರಂದು ಗ್ರಾಮಸ್ಥರಿಗೆ ದಿನಪತ್ರಿಕೆ ಮತ್ತು ರೇಡಿಯೋ ಮುಖಾಂತರ ಮಾಹಿತಿ ನೀಡಿ, ಎಚ್ಚರಿಕೆಯಿಂದಿರಲು ಸೂಚನೆ ನೀಡಲಾಗಿರುತ್ತದೆ.

ಮುಂದುವರೆದು, ಗ್ರಾಮಸ್ಥರ ಸಹಕಾರದೊಂದಿಗೆ ಕೂಂಬಿಂಗ್ ಕಾರ್ಯಾಚರಣೆಯನ್ನು ಹಮ್ಮಿಕೊಂಡ ಮೇರೆ ಕಾಡಾನೆಗಳನ್ನು ಪೂರ್ಣವಾಗಿ ಗ್ರಾಮದಿಂದ ಓಡಿಸಲಾಗಿದ್ದು, ಹುಲಿಯನ್ನು ನಾಗರಹೊಳೆ ಅಭಯಾರಣ್ಯದ ಕಡೆಗೆ ಹಿಮ್ಮೆಟ್ಟಿಸಲಾಗಿರುತ್ತದೆ. ಪ್ರಸ್ತುತ ಸದರಿ ಹುಲಿಯು ಪೊನ್ನಂಪೇಟೆ ವಲಯ ವ್ಯಾಪ್ತಿಯ ಕುಂದ ಗ್ರಾಮದ ಭಾಗವಾಗಿ ಮರಳಿ ಕಾಡಿಗೆ ಹೋಗುತ್ತಿರುವುದು ದೃಢಪಡಿಸಿಕೊಳ್ಳಲಾಗಿದೆ. ಪ್ರಸ್ತುತ ಕೊಳತ್ತೋಡು ಬೈಗೋಡು ಗ್ರಾಮದಲ್ಲಿ ಯಾವುದೇ ಕಾಡಾನೆ ಮತ್ತು ಹುಲಿಯ ಚಲನವಲನಗಳು ಕಂಡುಬಂದಿರುವುದಿಲ್ಲ ಮತ್ತು ಇತ್ತೀಚೆಗೆ ಯಾವುದೇ ಸಾಕು ಪ್ರಾಣಿಗಳಿಗೆ ಹಾನಿ ಮಾಡಿರುವ ಪ್ರಕರಣ ದಾಖಲಾಗಿರುವುದಿಲ್ಲ.

**ಸಂಖ್ಯೆ: ಅಪಜೀ 167 ಎಫ್‌ಡಬ್ಲ್ಯೂಎಲ್ 2023**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು